**ನಿರ್ದೇಶಕರ ಕಛೇರಿ**
ಅಲ್ಪಸಂಖ್ಯಾತರ ನಿರ್ದೇಶನಾಲಯ

**ಕರ್ನಾಟಕ ಸರ್ಕಾರ**

ದೂರವಾಣಿ:080-22864212.
ಫ್ಯಾಕ್ಸ್: 080-22863618.
**Email:directorgokdom@gmail.com**
**Web**: www.dom.karnataka.gov.in
ನಂ 16ಸಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ,
ವಸಂತ ನಗರ, ಬೆಂಗಳೂರು 560052.

**ಸಂಖ್ಯೆ:ಅಸಂನಿ/ಅ/ಪಿ.ಎಸ್.ಐ ತರಬೇತಿ/ಸಿಆರ್-01/2024-25** **ದಿನಾಂಕ: 04.05.2025**

**ಗೆ,**
**ಮಾನ್ಯ ನಿರ್ದೇಶಕರು,**
**ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯ,**
**ಬೆಂಗಳೂರು-01.**

**ಮಾನ್ಯರೇ,**

**ವಿಷಯ:** ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅಭ್ಯರ್ಥಿಗಳಿಂದ ಆನ್ ಲೈನ್ ಅರ್ಜಿ ಆಹ್ವಾನಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024-25ನೇ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ 90 ದಿನಗಳ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪುರುಷ & ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ತರಬೇತಿ ನೀಡಲು ಅರ್ಜಿಯನ್ನು ಸಲ್ಲಿಸಲು ಸೇವಾಸಿಂಧು ಪೋರ್ಟಲ್‌ನಲ್ಲಿ ಸೇವೆಯನ್ನು ಸಕ್ರಿಯಗೊಳಿಸಿ ದಿನಾಂಕ: 10.05.2025 ರಿಂದ ಪ್ರಾರಂಭಿಸಿ ದಿನಾಂಕ:05.06.2025 ರವರೆಗೆ ಮುಕ್ತಾಯಗೊಳಿಸಲು ಕೋರಲಾಗಿತ್ತು.

ಮುಂದುವರೆದು ಅಭ್ಯರ್ಥಿಗಳ ಕೋರಿಕೆ ಮತ್ತು ಸಹಾಯವಾಣಿಗೆ ಕರೆಗಳು ಬರುತ್ತಿರುವ ಕಾರಣ ದಿನಾಂಕ: 15.06.2025 ರವರೆಗೆ ಸೇವಾಸಿಂಧು ತಂತ್ರಾಂಶದಲ್ಲಿ ಸೇವೆಯನ್ನು ಮುಂದುವರೆಸಲು ಕೋರಿದೆ.

**ತಮ್ಮ ವಿಶ್ವಾಸಿ,**

**ನಿರ್ದೇಶಕರು,**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**

**ನಿರ್ದೇಶಕರ ಕಛೇರಿ**
ಅಲ್ಪಸಂಖ್ಯಾತರ ನಿರ್ದೇಶನಾಲಯ

**ಕರ್ನಾಟಕ ಸರ್ಕಾರ**

ದೂರವಾಣಿ:080-22864212.
ಫ್ಯಾಕ್ಸ್: 080-22863618.
**Email:**directorgokdom@gmail.com
**Web**: www.dom.karnataka.gov.in
ನಂ 16ಸಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ,
ವಸಂತ ನಗರ, ಬೆಂಗಳೂರು 560052.

**ಸಂಖ್ಯೆ:ಅಸಂನಿ/ಅ/ಪಿ.ಎಸ್.ಐ ತರಬೇತಿ/ಸಿಆರ್-01/2024-25** **ದಿನಾಂಕ: 22.05.2025**

ಗೆ,
ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
................................... ಜಿಲ್ಲೆ

ವಿಷಯ:- ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅಭ್ಯರ್ಥಿಗಳಿಂದ ಆನ್ ಲೈನ್ ಅರ್ಜಿ ಆಹ್ವಾನಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024-25ನೇ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ 90 ದಿನಗಳ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪುರುಷ & ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ಪ್ರಾರಂಭಿಸಲು ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ದಿನಾಂಕ: 10.05.2025 ರಿಂದ ಪ್ರಾರಂಭಿಸಿ ದಿನಾಂಕ:23.05.2025 ರವರೆಗೆ ಆಹ್ವಾನಿಸಲಾಗಿದ್ದು, ಅಭ್ಯರ್ಥಿಗಳ ಕೋರಿಕೆ ಮತ್ತು ಸಹಾಯವಾಣಿಗೆ ಕರೆಗಳು ಬರುತ್ತಿರುವ ಕಾರಣ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 05.06.2025 ರವರೆಗೂ ಮುಂದುವರೆಸಲಾಗಿದೆ. ಆದ್ದರಿಂದ, ತಮ್ಮ ಜಿಲ್ಲೆಗಳಲ್ಲಿ ಸದರಿ ಕಾರ್ಯಕ್ರಮಕ್ಕಾಗಿ ವ್ಯಾಪಕ ಪ್ರಚಾರ ನೀಡಿ ಅರ್ಜಿಗಳನ್ನು ಆಹ್ವಾನಿಸಲು ತಿಳಿಸಿದೆ.

ತಮ್ಮ ವಿಶ್ವಾಸಿ,

**ನಿರ್ದೇಶಕರು,**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**

ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080-22864212.
ಫ್ಯಾಕ್ಸ್: 080-22863618.
Email:directorgokdom@gmail.com
Web: www.dom.karnataka.gov.in
ನಂ 16ಸಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ,
ವಸಂತ ನಗರ, ಬೆಂಗಳೂರು 560052.

ಸಂಖ್ಯೆ:ಅಸಂನಿ/ಅ/ಪಿ.ಎಸ್.ಐ ತರಬೇತಿ/ಸಿಆರ್-01/2024-25 ದಿನಾಂಕ: 09.05.2025

# ಅಧಿಸೂಚನೆ

**ವಿಷಯ:** ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅಭ್ಯರ್ಥಿಗಳು ಆನ್ ಲೈನ್ ಅರ್ಜಿ ಸಲ್ಲಿಸುವ ಕುರಿತು.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024-25ನೇ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ 90 ದಿನಗಳ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪುರುಷ & ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ಪ್ರಾರಂಭಿಸಲು ಸರ್ಕಾರದಿಂದ ಆದೇಶ ಹೊರಡಿಲಾಗಿದೆ.

ಅದರಂತೆ, 2024-25ನೇ ಸಾಲಿಗೆ ಮಂಜೂರಾದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ ವಸತಿಯುತ Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿ ನೀಡುವ ಮೂಲಕ ರಾಜ್ಯಾಂಧ್ಯತ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು, ಅಭ್ಯರ್ಥಿಗಳ ಸುರಕ್ಷತಾ ದೃಷ್ಠಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು, ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ, ಪುರುಷ & ಮಹಿಳಾ ಅಭ್ಯರ್ಥಿಗಳಿಗೆ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ 90 ದಿನಗಳ ವಸತಿಯುತ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಸದರಿ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿವೆ.

| ಕ್ರ.ಸಂ. | ವಿವರ | |
|---|---|---|
| 1 | ಕೋರ್ಸ್ ವಿವರ | Police Sub Inspector (PSI) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿ |
| 2 | ತರಬೇತಿ ಅವಧಿ | 90 ದಿನಗಳು |
| 3 | ವಯಸ್ಸು | 21 ರಿಂದ 30 ವರ್ಷಗಳು |
| 4 | ವಿದ್ಯಾರ್ಹತೆ | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಯು.ಜಿ.ಸಿ ಇಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾನಿಲಯದಲ್ಲಿ ಪದವಿ ಪಡೆದಿರಬೇಕು. |
| 5 | ಅಭ್ಯರ್ಥಿಯ ಸಾಮಾನ್ಯ ಅರ್ಹತೆ | 1. ಸದರಿ ಅಭ್ಯರ್ಥಿಯು ಕರ್ನಾಟಕದ ಖಾಯಂ ನಿವಾಸಿಯಾಗಿದ್ದು, ರಾಜ್ಯ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸಮುದಾಯಗಳಿಗೆ ಸೇರಿದವರಾಗಿರಬೇಕು.<br>2. ಸದರಿ ಅಭ್ಯರ್ಥಿಯು ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3. ಎತ್ತರ: ಪುರುಷರಿಗೆ ಕನಿಷ್ಠ 168 ಸೆಂ.ಮೀ. ಮತ್ತು ಮಹಿಳೆಯರಿಗೆ ಕನಿಷ್ಠ 157 ಸೆಂ.ಮೀ.<br>4. ತೂಕ: ಪುರುಷರಿಗೆ ಕನಿಷ್ಠ 50 ಕೆ.ಜಿ. ಮತ್ತು ಮಹಿಳೆಯರಿಗೆ ಕನಿಷ್ಠ 45 |

| | | |
|---|---|---|
| | | ಕೆ.ಜಿ.<br>5. ಎದೆಯ ಸುತ್ತಳತೆ(ಪುರುಷರಿಗೆ): ಕನಿಷ್ಠ 76 ಸೆಂ.ಮೀ. |
| 6 | ಆಯ್ಕೆ ವಿಧಾನ | ಅಭ್ಯರ್ಥಿಗಳು ಪದವಿಯಲ್ಲಿ ಪಡೆದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. |
| 7 | ಅರ್ಜಿ ಸಲ್ಲಿಸುವ ವೆಬ್‌ಸೈಟ್ | 1. **https://sevasindhu.karnataka.gov.in/Sevasindhu/DepartmentServices**<br>2. **https://dom.karnataka.gov.in** |
| 8 | ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 10/05/2025 |
| 9 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 23/05/2025 |
| 10 | ತರಬೇತಿ ಸ್ಥಳಗಳು | ಮೈಸೂರು & ಬೆಳಗಾವಿ |

**ಗಮನದಲ್ಲಿಡಬೇಕಾದ ಅಂಶಗಳು:-**

- ಇಲಾಖಾ ವೆಬ್‌ಸೈಟ್‌ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಮತ್ತು ಅಂತಿಮವಾಗಿರುತ್ತದೆ.
- ಇಲಾಖಾ ವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್‌ಸೈಟ್ ಅನ್ನು ವೀಕ್ಷಿಸತಕ್ಕದ್ದು.
- ತಪ್ಪು ಮಾಹಿತಿ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಕಾರಣ
- ಕ್ರ.ಸಂ.06ರಲ್ಲಿ ತಿಳಿಸಿರುವಂತೆ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.
- ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ:8277799990 ಸಂಪರ್ಕಿಸುವುದು.

ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.